**All India Radio: Bangalore**
**National Bulletin In Kannada**
**10.03.2025 07.35 a.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ದಾಖಲೆಯ ೩ನೇ ಬಾರಿಗೆ ಐಸಿಸಿ ಚಾಂಪಿಯನ್ಸ್ ಟ್ರೋಫಿ ಕಿರೀಟ ಮುಡಿಗೇರಿಸಿಕೊಂಡ ಭಾರತ
2. ಮೂರು ದಿನಗಳ ಹರಿಯಾಣ, ಚಂಡೀಗಢ ಮತ್ತು ಪಂಜಾಬ್ ಭೇಟಿಗಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರವಾಸ
3. ೨ನೇ ಹಂತದ ಸಂಸತ್ತಿನ ಬಜೆಟ್ ಅಧಿವೇಶನ ಇಂದಿನಿಂದ ಆರಂಭ
4. ಬ್ರುಸೆಲ್ಸ್‌ನಲ್ಲಿ ಇಂದು ಭಾರತ ಹಾಗೂ ಐರೋಪ್ಯ ಒಕ್ಕೂಟ ನಡುವಿನ ಮುಕ್ತ ವ್ಯಾಪಾರ ಒಪ್ಪಂದ ಕುರಿತ ೧೦ನೇ ಸುತ್ತಿನ ಸಭೆ

<><><><>

ದಾಖಲೆಯ ೩ನೇ ಬಾರಿಗೆ ಭಾರತೀಯ ಕ್ರಿಕೆಟ್ ತಂಡ ಐಸಿಸಿ ಚಾಂಪಿಯನ್ಸ್ ಟ್ರೋಫಿ ಕಿರೀಟವನ್ನು ಮುಡಿಗೇರಿಸಿಕೊಂಡಿದೆ. ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಚಾಂಪಿಯನ್ಸ್ ಟ್ರೋಫಿ ಪಂದ್ಯಾವಳಿಯ ಅಂತಿಮ ಪಂದ್ಯದಲ್ಲಿ ನ್ಯೂಜಿಲೆಂಡ್ ವಿರುದ್ಧ ೪ ವಿಕೆಟ್‌ಗಳ ಭರ್ಜರಿ ಜಯ ಸಾಧಿಸುವ ಮೂಲಕ ಭಾರತ ೧೨ ವರ್ಷಗಳ ಬಳಿಕ ಈ ಐಸಿಸಿ ಟ್ರೋಫಿಗೆ ಮುತ್ತಿಕ್ಕಿದೆ.

ಧ್ವನಿ : ಭಾರತ ಜಯ

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್ ನಿಗದಿತ ೫೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೫೧ ರನ್ ಮಾಡಿತು. ೨೫೨ ರನ್‌ಗಳ ಗುರಿ ಬೆನ್ನತ್ತಿದ ಭಾರತ ೪೯ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೨೫೪ ರನ್ ಗಳಿಸಿ ಪ್ರಶಸ್ತಿ ತನ್ನದಾಗಿಸಿಕೊಂಡಿದೆ. ಗುರಿ ಬೆನ್ನತ್ತಿರುವಾಗ ರೋಹಿತ್ ಶರ್ಮ ಹಾಗೂ ಶುಭ್‌ಮನ್ ಗಿಲ್ ತಂಡಕ್ಕೆ ಉತ್ತಮ ಆರಂಭ ನೀಡಿದರು. ರೋಹಿತ್ ಶರ್ಮ ೭೬,

ಶುಭ್‌ಮನ್ ಗಿಲ್ ೩೧ ರನ್ ಗಳಿಸಿದರೆ ಮಧ್ಯ ಕ್ರಮಾಂಕದಲ್ಲಿ ಶ್ರೇಯಸ್ ಅಯ್ಯರ್, ಅಕ್ಸರ್ ಪಟೇಲ್ ಕ್ರಮವಾಗಿ ೪೮ ಹಾಗೂ ೨೯ ರನ್ ಗಳಿಸಿ ತಂಡಕ್ಕೆ ಕೊಡುಗೆ ನೀಡಿದರು. ಬಳಿಕ ಕರ್ನಾಟಕದ ಕೆ.ಎಲ್. ರಾಹುಲ್ ಹಾಗೂ ಹಾರ್ದಿಕ್ ಪಾಂಡ್ಯ ನಡುವಿನ ಉತ್ತಮ ಜೊತೆಯಾಟ ಹಾಗೂ ಜಡೇಜ ಅವರ ೯ ರನ್‌ಗಳ ಕೊಡುಗೆ ಭಾರತವನ್ನು ಗೆಲುವಿನ ದಡ ಸೇರಿಸಿತು. ಉತ್ತಮ ಪ್ರದರ್ಶನಕ್ಕಾಗಿ ನಾಯಕ ರೋಹಿತ್ ಶರ್ಮ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರೆ, ಟೂರ್ನಿಯುದ್ದಕ್ಕೂ ಅತ್ಯುತ್ತಮ ಪ್ರದರ್ಶನಕ್ಕಾಗಿ ನ್ಯೂಜಿಲೆಂಡ್‌ನ ರಚಿನ್ ರವೀಂದ್ರಗೆ ಸರಣಿ ಶ್ರೇಷ್ಠ ಪ್ರಶಸ್ತಿ ನೀಡಲಾಯಿತು. ೨೦೦೨ ಹಾಗೂ ೨೦೧೩ರಲ್ಲಿ ಚಾಂಪಿಯನ್ಸ್ ಟ್ರೋಫಿಯನ್ನು ಗೆದ್ದಿರುವ ಭಾರತ ತಂಡಕ್ಕೆ ಇದು ೩ನೇ ಟ್ರೋಫಿಯಾಗಿದೆ. ಭಾರತ ತಂಡದ ಈ ಸಾಧನೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ, ಸೇರಿದಂತೆ ಸಚಿವರು, ವಿವಿಧ ರಾಜಕೀಯ ಪಕ್ಷಗಳ ನಾಯಕರು ಅಭಿನಂದನೆ ಸಲ್ಲಿಸಿದ್ದಾರೆ. ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಚಾಂಪಿಯನ್ಸ್ ಟ್ರೋಫಿಯನ್ನು ೩ ಬಾರಿ ಗೆದ್ದ ಏಕೈಕ ತಂಡ ಭಾರತ ಎಂದಿರುವ ರಾಷ್ಟ್ರಪತಿ ಈ ಐತಿಹಾಸಿಕ ಸಾಧನೆಗೆ ತಂಡದ ಆಟಗಾರರು ಹಾಗೂ ಸಿಬ್ಬಂದಿಗೆ ಶುಭಾಶಯ ಕೋರಿದ್ದಾರೆ. ಭಾರತ ತಂಡದ ಈ ಯಶಸ್ಸನ್ನು ಶ್ಲಾಘಿಸಿರುವ ಪ್ರಧಾನಿ ನರೇಂದ್ರ ಮೋದಿ ಟೂರ್ನಿಯುದ್ಧಕ್ಕೂ ಭಾರತ ತಂಡ ಅತ್ಯುತ್ತಮ ಪ್ರದರ್ಶನ ನೀಡಿತು ಎಂದಿದ್ದಾರೆ. ಇನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯಾಧ್ಯಕ್ಷ ಜೆ.ಪಿ. ನಡ್ಡಾ, ಸಚಿವರಾದ ಅಶ್ವಿನಿ ವೈಷ್ಣವ್, ಜಿತೇಂದ್ರ ಸಿಂಗ್, ಮನ್ಸುಖ್ ಮಾಂಡವೀಯ, ಉತ್ತರಪ್ರದೇಶದ ಮುಖ್ಯಮಂತ್ರಿ ಯೋಗಿಆದಿತ್ಯನಾಥ್, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಭಾರತ ತಂಡವನ್ನು ಅಭಿನಂದಿಸಿದ್ದಾರೆ. ನಿನ್ನೆಯ ಪಂದ್ಯದಲ್ಲಿ ಐಸಿಸಿ ಅಧ್ಯಕ್ಷ ಜಯ್ ಶಾ, ಬಿಸಿಸಿಐ ಅಧ್ಯಕ್ಷ ರಾಜರ್ ಬಿನ್ನಿ, ಕಾರ್ಯದರ್ಶಿ ದೇವಜಿತ್ ಸೈಕಿಯಾ, ನ್ಯೂಜಿಲೆಂಡ್ ಕ್ರಿಕೆಟ್ ನಿರ್ದೇಶಕ ರಾಜರ್ ಟ್ವಾಸ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು. ಇದರ ನಡುವೆ ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ತನ್ನ ಅತಿಥ್ಯದಲ್ಲಿ ನಡೆಯುತ್ತಿರುವ ಚಾಂಪಿಯನ್ಸ್ ಟ್ರೋಫಿಯ ಫೈನಲ್ ಪಂದ್ಯಕ್ಕೆ ತನ್ನ ಒಬ್ಬ ಪ್ರತಿನಿಧಿಯನ್ನು ಕಳುಹಿಸದಿದ್ದಕ್ಕೆ ಟೀಕೆಗೆ ಗುರಿಯಾಗಿದೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಮೂರು ದಿನಗಳ ಕಾಲ ಹರಿಯಾಣ, ಚಂಡೀಗಢ ಮತ್ತು ಪಂಜಾಬ್‌ಗೆ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿಯ ಮೊದಲ ದಿನವಾದ ಇಂದು ರಾಷ್ಟ್ರಪತಿ,

ಹರಿಯಾಣ ಹಿಸಾರ್‌ನಲ್ಲಿರುವ ಗುರು ಜಂಭೇಶ್ವರ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಬಳಿಕ, ಬ್ರಹ್ಮ ಕುಮಾರಿಯರ ಸುವರ್ಣ ಮಹೋತ್ಸವ ಆಚರಣೆಯ ಸಂದರ್ಭದಲ್ಲಿ 'ಸಮಗ್ರ ಯೋಗಕ್ಷೇಮಕ್ಕಾಗಿ ಆಧ್ಯಾತ್ಮಿಕ ಶಿಕ್ಷಣ' ಎಂಬ ರಾಜ್ಯಮಟ್ಟದ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ರಾಷ್ಟ್ರಪತಿಗಳು ನಾಳೆ ಪಂಜಾಬ್ ಕೇಂದ್ರೀಯ ವಿಶ್ವವಿದ್ಯಾಲಯ ಮತ್ತು ಬಟಿಂಡಾದ ಏಮ್ಸ್‌ನ ಘಟಿಕೋತ್ಸವ ಸಮಾರಂಭಗಳಲ್ಲಿ ಭಾಗವಹಿಸಲಿದ್ದಾರೆ. ಸಂಜೆ, ಅವರು ಮೊಹಾಲಿಯಲ್ಲಿ ಪಂಜಾಬ್ ಸರ್ಕಾರ ಆಯೋಜಿಸಿರುವ ಸ್ವಾಗತ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಬುಧವಾರ, ರಾಷ್ಟ್ರಪತಿಗಳು ಚಂಡೀಗಢದ ಪಂಜಾಬ್ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ನಾಳೆ ಮತ್ತು ನಾಡಿದ್ದು ಮಾರಿಷಸ್‌ಗೆ ಎರಡು ದಿನಗಳ ಭೇಟಿ ನೀಡಲಿದ್ದು, ಈ ವೇಳೆ ಮಾರಿಷಸ್ ಪ್ರಧಾನಿಯವರೊಂದಿಗೆ ಭಾರತದ ನೆರವಿನೊಂದಿಗೆ ಕೈಗೊಂಡಿರುವ ವಿವಿಧ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ಈ ಯೋಜನೆಗಳಲ್ಲಿ ನಾಗರಿಕ ಸೇವಾ ಕಾಲೇಜು ಮತ್ತು ಪ್ರದೇಶ ಆರೋಗ್ಯ ಕೇಂದ್ರದ ಉದ್ಘಾಟನೆಯೂ ಸೇರಿದೆ. ಈ ಕುರಿತು ಮಾತನಾಡಿರುವ ಮಾರಿಷಸ್‌ನಲ್ಲಿರುವ ಭಾರತದ ಹೈಕಮಿಷನರ್ ಅನುರಾಗ್ ಶ್ರೀವಾಸ್ತವ, ಭಾರತ ಮತ್ತು ಮಾರಿಷಸ್ ಬಲವಾದ ಮತ್ತು ಕ್ರಿಯಾತ್ಮಕ ದ್ವಿಪಕ್ಷೀಯ ಸಂಬಂಧವನ್ನು ಹೊಂದಿವೆ ಮತ್ತು ಪ್ರಧಾನಿ ನರೇಂದ್ರ ಮೋದಿಯವರ ಭೇಟಿಯು ಎರಡೂ ದೇಶಗಳ ನಡುವಿನ ಬಲವಾದ ಬಾಂಧವ್ಯವನ್ನು ಪುನರುಚ್ಚರಿಸುತ್ತದೆ ಮತ್ತು ಈ ಸಂಬಂಧವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ.

ಧ್ವನಿ : ಹೈಕಮಿಷನರ್ ಅನುರಾಗ್ ಶ್ರೀವಾಸ್ತವ

<><><><>

೨ನೇ ಹಂತದ ಸಂಸತ್ತಿನ ಬಜೆಟ್ ಅಧಿವೇಶನ ಇಂದಿನಿಂದ ಆರಂಭವಾಗಲಿದೆ. ಏಪ್ರಿಲ್ ೪ರವರೆಗೆ ನಡೆಯಲಿರುವ ಈ ಹಂತದ ಅಧಿವೇಶನದಲ್ಲಿ ೨೦ ಬಾರಿ ಸದನ ಸಭೆ ಸೇರಲಿದೆ. ಇಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಮಣಿಪುರದ ಆಯವ್ಯಯವನ್ನು ಮಂಡಿಸಲಿದ್ದಾರೆ. ಮುಖ್ಯಮಂತ್ರಿ ಎನ್. ಬಿರೇನ್‌ಸಿಂಗ್ ಕಳೆದ ತಿಂಗಳು ರಾಜೀನಾಮೆ ನೀಡಿದ ನಂತರ ಮಣಿಪುರ ರಾಜ್ಯದಲ್ಲಿ ರಾಷ್ಟ್ರಪತಿ ಆಡಳಿತವಿದೆ.

<><><>

ಭಾರತ ಮತ್ತು ೨೭ ರಾಷ್ಟ್ರಗಳ ಐರೋಪ್ಯ ಒಕ್ಕೂಟ ಇಂದು ಬ್ರಸೆಲ್ಸ್‌ನಲ್ಲಿ ಪ್ರಸ್ತಾವಿತ ಮುಕ್ತ ವ್ಯಾಪಾರ ಒಪ್ಪಂದಕ್ಕಾಗಿ ಹತ್ತನೇ ಸುತ್ತಿನ ಮಾತುಕತೆಗಳನ್ನು ಪ್ರಾರಂಭಿಸಲಿವೆ. ಈ ವರ್ಷದ ಅಂತ್ಯದ ವೇಳೆಗೆ ಒಪ್ಪಂದವನ್ನು ಅಂತಿಮಗೊಳಿಸಲು ಹಾಗು ಉಳಿದ ಸಮಸ್ಯೆಗಳನ್ನು ಪರಿಹರಿಸುವತ್ತ ಮಾತುಕತೆಗಳು ಗಮನಹರಿಸುವ ನಿರೀಕ್ಷೆಯಿದೆ. ವ್ಯಾಪಾರ ಮತ್ತು ಆರ್ಥಿಕ ಭದ್ರತಾ ಆಯುಕ್ತ ಮಾರೋಸ್ ಸೆಫ್ಕೊವಿಕ್ ಅವರ ಇತ್ತೀಚಿನ ಭೇಟಿಯ ಸಂದರ್ಭದಲ್ಲಿ, ಸಮತೋಲಿತ ಮತ್ತು ಪರಸ್ಪರ ಪ್ರಯೋಜನಕಾರಿ ವ್ಯಾಪಾರ ಒಪ್ಪಂದದತ್ತ ಪ್ರಯತ್ನಗಳನ್ನು ವೇಗಗೊಳಿಸುವ ಮಾರ್ಗಗಳ ಕುರಿತು ಭಾರತ ಹಾಗೂ ಐರೋಪ್ಯ ಒಕ್ಕೂಟವು ಚರ್ಚಿಸಿವೆ. ಟ್ರಂಪ್ ಆಡಳಿತದ ಹೆಚ್ಚಿನ ಸುಂಕಗಳ ಬೆದರಿಕೆಯ ನಡುವೆಯೂ ಈ ವರ್ಷ ಮಹತ್ವಾಕಾಂಕ್ಷೆಯ ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದವನ್ನು ತೀರ್ಮಾನಿಸಲು ಪ್ರಧಾನಿ ನರೇಂದ್ರ ಮೋದಿ ಮತ್ತು ಯುರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಕಳೆದ ತಿಂಗಳು ಒಪ್ಪಿಕೊಂಡರು. ಜೂನ್ ೨೦೨೨ ರಲ್ಲಿ, ಭಾರತ ಮತ್ತು ೨೭ ರಾಷ್ಟ್ರಗಳ ಐರೋಪ್ಯ ಒಕ್ಕೂಟ ಬಣವು ಎಂಟು ವರ್ಷಗಳ ಅಂತರದ ನಂತರ ಮಾತುಕತೆಗಳನ್ನು ಪುನರಾರಂಭಿಸಿತು.

<><><>

ಕೆನಡಾದಲ್ಲಿ ಆಡಳಿತಾರೂಢ ಲಿಬರಲ್ ಪಾರ್ಟಿ ಮಾರ್ಕ್ ಕಾರ್ನಿ ಅವರನ್ನು ತನ್ನ ನಾಯಕನಾಗಿ ಆಯ್ಕೆ ಮಾಡಿದ ಬೆನ್ನಲ್ಲೆ ಅವರು, ಕೆನಡಾದ ಮುಂದಿನ ಪ್ರಧಾನಿಯಾಗಲಿದ್ದಾರೆ. ಮುಂಬರುವ ದಿನಗಳಲ್ಲಿ ಅವರು, ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಕಳೆದ ಜನವರಿಯಲ್ಲಿ ರಾಜೀನಾಮೆ ಘೋಷಿಸಿದ ಪ್ರಧಾನಿ ಜೆಸ್ಟಿನ್ ಟ್ರೂಡೊ ಅವರ ಸ್ಥಾನವನ್ನು ೫೯ ವರ್ಷದ ಕಾರ್ನಿ ವಹಿಸಿಕೊಳ್ಳಲಿದ್ದಾರೆ. ಕಾರ್ನಿ ಅವರು, ಈ ಹಿಂದೆ ಬ್ಯಾಂಕ್ ಆಫ್ ಕೆನಡಾದ ಗವರ್ನರ್ ಆಗಿ ಸೇವೆ ಸಲ್ಲಿಸಿದ್ದಾರೆ.

<><><>

ಮಧ್ಯಪ್ರದೇಶದಲ್ಲಿಂದು ಮುಖ್ಯಮಂತ್ರಿ ಮೋಹನ್ ಯಾದವ್ ರಾಜ್ಯದ ೯ನೇ ಹುಲಿ ಸಂರಕ್ಷಣಾಲಯ ಮಾಧವ ರಾಷ್ಟ್ರೀಯ ಉದ್ಯಾನವನವನ್ನು ಉದ್ಘಾಟಿಸಲಿದ್ದಾರೆ. ಇದೇ ವೇಳೆ ಅವರು, ೧೩ ಕಿಲೋಮೀಟರ್ ಉದ್ದದ ಸುರಕ್ಷತಾ ಕಲ್ಲುಗೋಡೆಯನ್ನು ಉದ್ಘಾಟಿಸಲಿದ್ದಾರೆ. ರಾಜ್ಯಕ್ಕೆ ೯ನೇ ಹುಲಿ ಸಂರಕ್ಷಣಾಲಯವನ್ನು ದಯಪಾಲಿಸಿದಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಧನ್ಯವಾದ

ಅರ್ಪಿಸಿದ್ದಾರೆ. ಇದು ಹುಲಿಗಳಿಗಾಗಿ ಮೀಸಲಿರುವ ದೇಶದ ೫೮ನೇ ಉದ್ಯಾನವನವಾಗಿದೆ. ಮುಖ್ಯಮಂತ್ರಿ ಮೋಹನ್ ಯಾದವ್, ಶಿವಪುರ ಜಿಲ್ಲೆಯ ಈ ಹುಲಿ ಸಂರಕ್ಷಣಾಲಯ ವನ್ಯಜೀವಿ ಸಂರಕ್ಷಣೆ ಮತ್ತು ಪ್ರವಾಸೋದ್ಯಮವನ್ನು ಉತ್ತೇಜಿಸಲಿದೆ ಎಂದಿದ್ದಾರೆ.

<><><><>

ಭಾರತ-ಕಿರ್ಗಿಸ್ತಾನ್ ಜಂಟಿ ವಿಶೇಷ ಪಡೆಗಳ ಸಮರಾಭ್ಯಸ ಖಂಜರ್ - ೧೨ ನೇ ಆವೃತ್ತಿ ಇಂದು ಕಿರ್ಗಿಸ್ತಾನ್‌ನಲ್ಲಿ ಪ್ರಾರಂಭವಾಗಲಿದೆ. ೧೪ ದಿನಗಳ ಜಂಟಿ ಸಮರಾಭ್ಯಸವು ಈ ತಿಂಗಳ ೨೩ ರವರೆಗೆ ಮುಂದುವರಿಯಲಿದೆ. ನಗರ ಮತ್ತು ಪರ್ವತದ ಎತ್ತರದ ಭೂಪ್ರದೇಶಗಳಲ್ಲಿ ಭಯೋತ್ಪಾದನೆ ನಿಗ್ರಹ ಮತ್ತು ವಿಶೇಷ ಪಡೆಗಳ ಕಾರ್ಯಾಚರಣೆಗಳಲ್ಲಿ ಅನುಭವಗಳು ಮತ್ತು ಉತ್ತಮ ಅಭ್ಯಾಸಗಳನ್ನು ವಿನಿಮಯ ಮಾಡಿಕೊಳ್ಳುವುದು ಈ ಸಮರಾಭ್ಯಸದ ಉದ್ದೇಶವಾಗಿದೆ.

<><><><>

ದೆಹಲಿಯ ಜವಹರ್‌ಲಾಲ್ ನೆಹರು ಕ್ರೀಡಾಂಗಣದಲ್ಲಿ ನಾಳೆಯಿಂದ ನಡೆಯಲಿರುವ 'ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಗ್ರ್ಯಾನ್ ಫಿಕ್ಸ್-೨೦೨೫' ಕ್ರೀಡಾಕೂಟದಲ್ಲಿ ಭಾರತದ ೧೪೫ ಅಥ್ಲೀಟ್‌ಗಳು ಭಾಗವಹಿಸಲಿದ್ದಾರೆ. ೧೯ ದೇಶಗಳ ಪ್ಯಾರಾ ಅಥ್ಲೀಟ್‌ಗಳು ಭಾಗವಹಿಸುತ್ತಿದ್ದಾರೆ. ಸೌದಿ ಅರೇಬಿಯಾ, ಜರ್ಮನಿ, ಕಜಕಿಸ್ತಾನ್, ಉಜ್ಬೇಕಿಸ್ತಾನ್, ಪಿಲಿಫೈನ್ಸ್, ಜಪಾನ್, ಆಸ್ಟ್ರೇಲಿಯಾ, ಬ್ರೆಜಿಲ್, ನೇಪಾಳ, ಭೂತಾನ್ ಮತ್ತು ಶ್ರೀಲಂಕಾದ ಕ್ರೀಡಾಪಟುಗಳು ಈಗಾಗಲೇ ದೆಹಲಿ ಕ್ರೀಡಾಂಗಣದಲ್ಲಿ ತಾಲೀಮು ನಡೆಸುತ್ತಿದ್ದಾರೆ. ಮೂರು ದಿನಗಳ ಕ್ರೀಡಾಕೂಟದಲ್ಲಿ ೯೦ ಕ್ಕೂ ಅಧಿಕ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

<><><><>

ಜಮ್ಮು-ಕಾಶ್ಮೀರದ ಬಾರಾಮುಲ್ಲಾ ಜಿಲ್ಲೆಯಲ್ಲಿ ೨ನೇ ಚರಣದ ಖೇಲೋ ಇಂಡಿಯಾ ಚಳಿಗಾಲದ ಕ್ರೀಡಾಕೂಟ - ೨೦೨೫ಕ್ಕೆ ನಿನ್ನೆ ಚಾಲನೆ ದೊರೆತಿದೆ. ಪುರುಷರ ಸ್ನೋಬೋರ್ಡಿಂಗ್ ಸ್ಲ್ಯಾಲಮ್‌ನಲ್ಲಿ ಜಮ್ಮು-ಕಾಶ್ಮೀರದ ಮೆಹರಾಜುದ್ದೀನ್ ಖಾನ್ ಚಿನ್ನದ ಪದಕ, ಮಹಿಳಾ ವಿಭಾಗದಲ್ಲಿ ಉತ್ತರಾಖಂಡದ ಮೆಂಕ ಗುಂಜಿಯಾಲ್ ಚಿನ್ನದ ಪದಕ ಗೆದ್ದಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>